**ಸಾಕ್ಷಿಗೆ ದಿಃ 29.08.2025 ರಂದು ಪ್ರಮಾಣ ವಚನ ಭೋದಿಸಲಾಯಿತು**

**ಮುಂದುವರಿದ ಮುಖ್ಯ ವಿಚಾರಣೆಃ ಅರ್ಜಿದಾರರ ಪರ ಶ್ರೀ ಎಸ್ ಜಿ ಪಿ ವಕೀಲರಿಂದಃ**

ನಾನು ನನ್ನ ಮುಖ್ಯ ವಿಚಾರಣೆಯನ್ನು ಶಪಥ ಪತ್ರದ ಮುಖಾಂತರ ಸಲ್ಲಿಸಿದ್ದು ಅದರಲ್ಲಿ ಬರೆದಿರುವ ವಿಷಯಗಳು ಸರಿ ಇರುತ್ತದೆ. ದಿಃ17.08.2022 ರಂದು ನನ್ನ ಗಂಡ ಶಂಕರಪ್ಪರವರು ಬರೆದ ನೊಂದಾಯಿತ ಮೃತ್ಯು ಪತ್ರವನ್ನು ನೋಡುತ್ತಿದ್ದು ಅದನ್ನು ನಿಪಿ–1 ಎಂದು ಗುರ್ತಿಸಲಾಯಿತು. ಶಂಕರಪ್ಪ ಇವರ ಮರಣ ಪ್ರಮಾಣ ಪತ್ರವನ್ನು ನೋಡುತ್ತಿದ್ದು ಅದನ್ನು ನಿಪಿ–2 ಎಂದು ಗುರ್ತಿಸಲಾಯಿತು. ಸರ್ವೆ ನಂಬರ್ 9/4 ರ ಆರ್ ಟಿ ಸಿ ಯನ್ನು ನೋಡುತ್ತಿದ್ದು ನಿಪಿ–3 ಎಂದು ಗುರ್ತಿಸಲಾಯಿತು. ವಂಶವೃಕ್ಷ ದೃಡೀಕರಣ ಪತ್ರವನ್ನು ನೋಡುತ್ತಿದ್ದು ನಿಪಿ–4 ಎಂದು ಗುರುತಿಸಲಾಯಿತು. ಶಂಕರಪ್ಪ ಇವರ ಚುನಾವಣ ಗುರುತಿನ ಚೀಟಿ ಹಾಗೂ ಆಧಾರ್ ಕಾರ್ಡಿನ ನಕಲನ್ನು ನೋಡುತ್ತಿದ್ದು ನಿಪಿ–5 ಮತ್ತು 6 ಎಂದು ಕ್ರಮವಾಗಿ ಗುರುತಿಸಲಾಯಿತು. ನನ್ನ ಆಧಾರ್ ಕಾರ್ಡ್ ನಕಲನ್ನು ನೋಡುತ್ತಿದ್ದು ಅದನ್ನು ನಿಪಿ–7 ಎಂದು ಗುರ್ತಿಸಲಾಯಿತು. ಈ ಅರ್ಜಿಯನ್ನು ಸಲ್ಲಿಸಿದ ನಂತರ ಕನ್ನಡ ಪ್ರಭ ದಿನಪತ್ರಿಕೆಯಲ್ಲಿ ನೀಡಿದ ಪೇಪರ್ ಪಬ್ಲಿಕೇಷನ್ ನೋಡುತ್ತಿದ್ದು ಅದನ್ನು ನಿಪಿ–8 ಎಂದು ಗುರ್ತಿಸಲಾಯಿತು.

**ಪಾಟೀ ಸವಾಲುಃ** ನಿಪಿ–8 ನೋಟಿಸಿನ ಪ್ರಕಾರ ಯಾವುದೇ ಎದುರುದಾರರು ಹಾಜರಾಗದೇ ಇದ್ದ ಕಾರಣ ಸಾಕ್ಷಿಯ ಪಾಟೀ ಸವಾಲು ಇರುವುದಿಲ್ಲ.

(ನನ್ನ ಉಕ್ತಲೇಖನಕ್ಕೆ ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದ್ದನ್ನು ಯಥಾವತ್ತಾಗಿ ಬೆರಳಚ್ಚು ಮಾಡಲಾಗಿದೆ.)

ಓ ಹೇ ಕೇ ಸ ಇ ಎ ಒ

(ಕೆ. ಗುರುಪ್ರಸಾದ್)
2 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು.